ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೪

# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆಂಟನೆಯ ಅಧಿವೇಶನ

## ( ಮುಂದುವರೆದ ಉಪವೇಶನಗಳು )

## ಮಂಗಳವಾರ, ದಿನಾಂಕ : ೨೪ನೇ ಮಾರ್ಚ್, ೨೦೨೬

---

### ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

೨. ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

೩. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

೪. ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

೫. ಪೌರಾಡಳಿತ ಮತ್ತು ಹಜ್ ಸಚಿವರು

೬. ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು

---

### ಘನ ತ್ಯಾಜ್ಯ ವಿಲೇವಾರಿ ನಿರ್ವಹಣೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೯೬ (೧೯೬೮) ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ವಿಲೇವಾರಿ ಸಮರ್ಪಕವಾಗಿ ನಡೆಯದೆ ಸಾರ್ವಜನಿಕರ ಆರೋಗ್ಯ ಹಾಗೂ ಪರಿಸರ ಸಮಸ್ಯೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರತಿದಿನ ಉತ್ಪತ್ತಿಯಾಗುವ ಘನ ತ್ಯಾಜ್ಯದ ಒಟ್ಟು ಪ್ರಮಾಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ವೈಜ್ಞಾನಿಕ ತ್ಯಾಜ್ಯ ಸಂಸ್ಕರಣೆ ಘಟಕಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದ ಅನೇಕ ನಗರಗಳಲ್ಲಿ ರಸ್ತೆ ಬದಿಯಲ್ಲಿ ಕಸದ ರಾಶಿಗಳು ಹೆಚ್ಚುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮೂಲದಲ್ಲೇ ಕಸ ವಿಗಂಡಣೆ (Segregation) ಕಡ್ಡಾಯ ಜಾರಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಘನ ತ್ಯಾಜ್ಯ ನಿರ್ವಹಣೆಗೆ ಸರ್ಕಾರದಿಂದ ಅನುದಾನ ಬಿಡುಗಡೆ ಆಗುತ್ತಿದ್ದೂ ಶಾಶ್ವತ ಕಸ ಸಂಸ್ಕರಣೆ ವ್ಯವಸ್ಥೆ ಸ್ಥಾಪನೆ ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ; (ಕಳೆದ ೨ ವರ್ಷಗಳ ಜಿಲ್ಲಾವಾರು ಘನ ತ್ಯಾಜ್ಯ ಸಂಸ್ಕರಣೆ ಯೋಜನೆಗಳ ಪ್ರಗತಿ ವಿವರವನ್ನು ನೀಡುವುದು)

(ಉ) ಘನ ತ್ಯಾಜ್ಯ ಸಂಗ್ರಹಣೆ ಹಾಗೂ ವಿಲೇವಾರಿಯಲ್ಲಿ ತೊಡಗಿರುವ ಪೌರಕಾರ್ಮಿಕರಿಗೆ ಅಗತ್ಯ ಸುರಕ್ಷತಾ ಸಾಧನಗಳು, ನಿಯಮಿತ ವೇತನ ಹಾಗೂ ಯಾಂತ್ರೀಕೃತ ವ್ಯವಸ್ಥೆ ಒದಗಿಸುವ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ಸಣ್ಣ ಕೈಗಾರಿಕೆಗಳಿಗೆ ಸರ್ಕಾರದ ಪ್ರೋತ್ಸಾಹಧನ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) –**

೧೯೭ (೧೯೪೮) ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಿರುದ್ಯೋಗಿ ಯುವಕ, ಯುವತಿಯರಿಗೆ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆ ಸ್ಥಾಪಿಸಲು ಸರ್ಕಾರದ ವತಿಯಿಂದ ನೀಡುತ್ತಿರುವ ಸೌಲಭ್ಯಗಳೇನು ;

(ಆ) ಕಳೆದ ೦೨ ವರ್ಷಗಳಲ್ಲಿ ರಾಜ್ಯದಲ್ಲಿ ಪ್ರಾರಂಭವಾದ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ; ಸರ್ಕಾರ ಅವುಗಳಿಗೆ ನೀಡಿದ ಪ್ರೋತ್ಸಾಹ ಧನ/ಸಹಾಯ ಧನವೆಷ್ಟು ;

(ಇ) ಮಾಲಿನ್ಯ ರಹಿತವಾದ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳನ್ನು ವಸತಿ ಪ್ರದೇಶದಲ್ಲಿ ಪ್ರಾರಂಭಿಸಲು ಅವಕಾಶವಿದೆಯೇ ? (ಸಂಬಂಧಿಸಿದ ಆದೇಶ/ ಕಾಯ್ದೆಯ ಪ್ರತಿಯನ್ನು ನೀಡುವುದು)

## ಪಾರಂಪರಿಕ ಕಟ್ಟಡಗಳ ಸುತ್ತಮುತ್ತ ಬಹುಮಹಡಿ ಕಟ್ಟಡ ತಡೆಗಟ್ಟುವ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) –**

೧೯೮ (೨೨೧೪) ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಾಭಿವೃದ್ಧಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಪಾರಂಪರಿಕ ಕಟ್ಟಡಗಳನ್ನು ಸಂರಕ್ಷಿಸುವ ನಿಟ್ಟಿನಲ್ಲಿ, ಅವುಗಳ ಸುತ್ತಮುತ್ತ ಬಹುಮಹಡಿ ಕಟ್ಟಡಗಳ ನಿರ್ಮಾಣವನ್ನು ನಿರ್ಬಂಧಿಸುವ ಅಥವಾ ನಿಯಂತ್ರಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಆ) ಪಾರಂಪರಿಕ ಕಟ್ಟಡಗಳ ಪಕ್ಕದಲ್ಲಿ ನಿಯಮಬಾಹಿರವಾಗಿ ಬಹುಮಹಡಿ ಕಟ್ಟಡಗಳು ನಿರ್ಮಾಣವಾಗಿರುವ ಬಗ್ಗೆ ಸರ್ಕಾರವು ಈವರೆಗೆ ಯಾವುದಾದರೂ ಸಮೀಕ್ಷೆ (Survey) ನಡೆಸಿದೆಯೇ ; ಇಲ್ಲದಿದ್ದಲ್ಲಿ, ಇಂತಹ ಕಟ್ಟಡಗಳನ್ನು ಗುರುತಿಸಲು ಸರ್ವೆ ಮಾಡುವ ಆಲೋಚನೆ ಸರ್ಕಾರಕ್ಕೆ ಇದೆಯೇ ;

(ಇ) ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಈವರೆಗೆ ಎಷ್ಟು ಪಾರಂಪರಿಕ ಕಟ್ಟಡಗಳು ನಿರ್ವಹಣೆಯಿಲ್ಲದೆ ನೆಲಸಮವಾಗಿವೆ ಈ ಬಗ್ಗೆ ಸರ್ಕಾರದ ಬಳಿ ಇರುವ ಅಧಿಕೃತ ಮಾಹಿತಿ ಏನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಮೈಸೂರಿನ ಐತಿಹಾಸಿಕ ಲ್ಯಾನ್ಸ್‌ಡೌನ್ ಬಿಲ್ಡಿಂಗ್ (Lansdowne Building) ದೇವರಾಜ ಮಾರುಕಟ್ಟೆ, ವಿ.ವಿ. ಮಾರುಕಟ್ಟೆ ಮತ್ತು ಮಂಡಿಮೊಹಲ್ಲಾದ ಚಿಕ್ಕ ಮಾರುಕಟ್ಟೆಗಳು ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಲ್ಯಾನ್ಸ್‌ಡೌನ್ ಬಿಲ್ಡಿಂಗ್ ಬಿದ್ದು ಹತ್ತು ವರ್ಷಗಳಾಗಿದೆ. ಹಾಗಾಗಿ ಈ ಪಾರಂಪರಿಕ ಕಟ್ಟಡಗಳನ್ನು

ಮೂಲ ಸ್ವರೂಪಕ್ಕೆ ಧಕ್ಕೆಯಾಗದಂತೆ ಸಂರಕ್ಷಿಸಲು ಸರ್ಕಾರವು ತುರ್ತಾಗಿ ಕೈಗೊಂಡಿರುವ ಕ್ರಮಗಳೇನು ಅಥವಾ ಅದೇ ವಿನ್ಯಾಸದಲ್ಲಿ ಮರು ನಿರ್ಮಾಣ ಮಾಡಲು ಸರ್ಕಾರ ಚಿಂತಿಸಿದೆಯೇ ?

## ಎಂ.ಎಸ್.ಎಂ.ಇ. ಉದ್ಯಮಗಳಿಗೆ ಸರ್ಕಾರದಿಂದ ಸಬ್ಸಿಡಿ ಬಿಡುಗಡೆಯಾಗದಿರುವ ಕುರಿತು

**ಡಾ: ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) –**

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) –**

೧೯೯ (೨೦೦೧+೧೯೭೪) ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಿಂದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಪ್ರಮಾಣ (ಎಂ.ಎಸ್.ಎಂ.ಇ) ಉದ್ಯಮಗಳಿಗೆ ಸಬ್ಸಿಡಿ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ೮ ಲಕ್ಷಕ್ಕೂ ಅಧಿಕ ಎಂ.ಎಸ್.ಎಂ.ಇ. ಗಳು ಆರ್ಥಿಕ ಮುಗ್ಗಟ್ಟಿಗೆ ಒಳಗಾಗಿದ್ದು, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಲಕ್ಷಾಂತರ ಜನರಿಗೆ ಉದ್ಯೋಗ ನೀಡುವ ಎಂ.ಎಸ್.ಎಂ.ಇ.ಗಳು ಸರ್ಕಾರದ ಸಬ್ಸಿಡಿ ನೆಚ್ಚಿಕೊಂಡಿರುವುದರಿಂದ ಸಬ್ಸಿಡಿ ಬಿಡುಗಡೆ ಮಾಡಲು ತ್ವಕ್ಷಣವೇ ಕ್ರಮ ಕೈಗೊಳ್ಳಬಹುದೇ ;

(ಈ) ನೈಜ–ಸಮಯದ ಉದ್ಯೋಗ ಹೊಂದಾಣಿಕೆಗಾಗಿ ಏಕೀಕೃತ "MSME ಉದ್ಯೋಗ ಪೋರ್ಟಲ್" ಅನ್ನು ರಚಿಸಲು ಸರ್ಕಾರದಿಂದ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ;

(ಉ) MSMEಗಳಿಗೆ ಸಂಬಂಧಿಸಿದ ಡಿಜಿಟಲ್ ಉದ್ಯೋಗ ವೇದಿಕೆಗಳಿಂದ ಗ್ರಾಮೀಣ ಯುವಕರು ಸಮರ್ಪಕವಾಗಿ ಪ್ರಯೋಜನ ಪಡೆಯುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಉದ್ಯೋಗ ಸಂಬಂಧಿತ ಅಪ್ಲಿಕೇಶನ್‌ಗಳಲ್ಲಿ ಪಾರದರ್ಶಕತೆಯನ್ನು ಸರ್ಕಾರ ಹೇಗೆ ಖಚಿತಪಡಿಸಿಕೊಳ್ಳುತ್ತಿದೆ ಮತ್ತು ನಕಲಿ ಉದ್ಯೋಗ ಪಟ್ಟಿಗಳನ್ನು ಹೇಗೆ ತಡೆಯುತ್ತಿವೆ ;

(ಋ) ಸರ್ಕಾರಿ ಸ್ಮಾರ್ಟ್ ಪ್ಲಾಟ್‌ಫಾರ್ಮ್‌ಗಳ ಮೂಲಕ ಸ್ಥಳೀಯ ನಿರುದ್ಯೋಗಿ ಅಭ್ಯರ್ಥಿಗಳನ್ನು ನೇಮಿಸಿಕೊಳ್ಳುವ MSME ಗಳಿಗೆ ಯಾವ ಪ್ರೋತ್ಸಾಹ ಧನಗಳನ್ನು ನೀಡಲಾಗುತ್ತದೆ ?

## ಕಲ್ಲು ಗಣಿಗಾರಿಕೆಗಳು ಸ್ಮಶಾನ ಜಾಗದಲ್ಲಿ ಕಾನೂನು ಬಾಹಿರವಾಗಿ ನಡೆಯುತ್ತಿರುವ ಬಗ್ಗೆ

**ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೦ (೧೯೪೦) ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆ/ತಾಲ್ಲೂಕು ಕಸಬಾ ಹೋಬಳಿ ವ್ಯಾಪ್ತಿಯಲ್ಲಿ ಯರೇಬರೆ ಕಾವಲು ಗ್ರಾಮದಲ್ಲಿ ಕಲ್ಲು ಗಣಿಗಾರಿಕೆಯು ಸ್ಮಶಾನ ಜಾಗದಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಯರೇಬರೆ ಗ್ರಾಮದ ಸರ್ವೇ ನಂಬರ್ ೮೩ ಈ ಹಿಂದೆ ಸ್ಮಶಾನ ಜಾಗವಾಗಿದ್ದು ಇದಕ್ಕೆ ಅನುಮತಿ ನೀಡಲು ಸಾರ್ವಜನಿಕರ ಅಭಿಪ್ರಾಯ ಕೇಳಲಾಗಿದೆಯೇ ; ಸಾರ್ವಜನಿಕರಿಗೆ ಇದರಿಂದ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಥವಾ ಸಾರ್ವಜನಿಕರಿಂದ ಯಾವುದಾದರೂ ದೂರುಗಳು ಬಂದಿದೆಯೇ ; ಬಂದಿದ್ದಲ್ಲಿ, ದಾಖಲೆ ಸಮೇತ ಮಾಹಿತಿ ನೀಡುವುದು ;

(ಇ) ಈ ಕಲ್ಲು ಗಣಿಗಾರಿಕೆ ಕಾನೂನು ಬಾಹಿರವೆಂದು ಸಾರ್ವಜನಿಕರು ತಿಳಿಸುತ್ತಿದ್ದು ಇದಕ್ಕೆ ಸರ್ಕಾರದ ನಿಲುವೇನು ; ಅಕ್ರಮವಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಅನುಮತಿ ನೀಡಲು

ದೃಢೀಕೃತ ದಾಖಲೆಗಳನ್ನು ಗಣಿ ಮತ್ತು ಭೂ ವಿಜ್ಞಾನ ಇಲಾಖೆಗೆ ನೀಡಲಾಗಿದೆಯೇ ; ನೀಡಿದ್ದಲ್ಲಿ, ಅದನ್ನು ಲಗತ್ತಿಸುವುದು ;

(ಈ) ಯರೇಬರೆ ಜಾಗದಲ್ಲಿ ಯಾವ ಕಲ್ಲು ಸಿಕ್ಕಿರುತ್ತದೆ ; ಸ್ಮಶಾನ ಜಾಗವನ್ನು ಪರ್ಯಾಯವಾಗಿ ಬೇರೆ ಸ್ಥಳದಲ್ಲಿ ನೀಡಲಾಗಿದೆಯೇ ; ನೀಡದಿದ್ದಲ್ಲಿ, ಸರ್ಕಾರ ಬೇರೆ ಜಾಗ ನೀಡುವ ಬಗ್ಗೆ ಚಿಂತಿಸಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಈ ಜಾಗದಲ್ಲಿ ಕಲ್ಲು ಗಣಿಗಾರಿಕೆ ಮಾಡುತ್ತಿರುವುದು ನಿಲ್ಲಿಸಬೇಕು ಇದರಿಂದ ಸಾರ್ವಜನಿಕರಿಗೆ ಅಪಾಯವಿದೆ ಎಂದು ಸಾರ್ವಜನಿಕರು ಮನವಿ ಮಾಡುತ್ತಿದ್ದು, ಇದನ್ನು ತಡೆಗಟ್ಟುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## M/s. ACC Ltd., ರವರ ಗಣಿಗಾರಿಕೆ ಗುತ್ತಿಗೆ ನವೀಕರಣ ಕುರಿತು

**ಡಾ: ಆರತಿ ಕೃಷ್ಣ (ನಾಮನಿರ್ದೇಶನ ಹೊಂದಿದವರು) –**

೨೦೧ (೧೯೯೦) ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) M/s. ACC Ltd., ರವರು ಕಲಬುರಗಿಯ ವಾಡಿಯ ಕಣ್ಣೂರು ಲೈಮ್‌ಸ್ಟೋನ್ ಬ್ಲಾಕ್‌ನಲ್ಲಿ ಗಣಿಗಾರಿಕೆ ಮಾಡಲು ಪಡೆದ ಗುತ್ತಿಗೆ ಅವಧಿ ಮುಕ್ತಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಕಂಪನಿಯವರು ರಾಜ್ಯ ಸರ್ಕಾರಕ್ಕೆ ಪಾವತಿಸಬೇಕಾದ ರಾಜಧನ/ ಬಾಡಿಗೆ/ದಂಡದ ಒಟ್ಟು ಮೊತ್ತ ರೂ.೮೫೦.೨೧ ಕೋಟಿಗಳನ್ನು ಪಾವತಿಸದೆ, ಸದರಿ ಸ್ಥಳದಲ್ಲಿ ಅನಧಿಕೃತವಾಗಿ ಗಣಿಗಾರಿಕೆ ಮಾಡುತ್ತಿರುವುದರ ವಿರುದ್ಧ (ಕಾನೂನು ಇಲಾಖೆಯ ಅಭಿಪ್ರಾಯದಲ್ಲಿ ಪ್ರಸ್ತಾಪಿಸಿರುವಂತೆ) ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ ;

(ಆ) ಸದರಿ ಸಂಸ್ಥೆಯವರು ಸರ್ಕಾರಕ್ಕೆ ಪಾವತಿಸಬೇಕಾದ ಎಲ್ಲಾ ಬಾಕಿಗಳನ್ನು ಪಾವತಿಸುವರೆಗೂ ಪ್ರಸ್ತಾಪಿತ ಕಂಪನಿಗೆ ಗಣಿಗಾರಿಕೆ ಮಾಡಲು ಅವಕಾಶ ಮಾಡಿಕೊಡದಂತೆ ಕಾನೂನು ಇಲಾಖೆ ಮುಖಾಂತರ ಗಣಿಗಾರಿಕೆ

ಇಲಾಖೆಗೆ ಲಿಖಿತ ಅಭಿಪ್ರಾಯ ನೀಡಿದ್ದರೂ ಕೂಡ, ಕಾನೂನು ಇಲಾಖೆಯ ಅಭಿಪ್ರಾಯದಂತೆ M/s. ACC Ltd., ರವರ ಕಂಪನಿಯವರ ವಿರುದ್ಧ ಯಾವುದೇ ಕಾನೂನು ಕ್ರಮವಾಗದೆ, ಈ ಕಂಪನಿಗೆ ಗುತ್ತಿಗೆ ನವೀಕರಣ ಮಾಡುವ ಕುರಿತು ಕೇಂದ್ರ ಸರ್ಕಾರದವರಿಗೆ ಪತ್ರ ಬರೆದಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಇ) ಸದರಿ ಕಂಪನಿಯವರ ಗುತ್ತಿಗೆ ನವೀಕರಣದಲ್ಲಿ ಕಾನೂನು ಇಲಾಖೆಯ ಅಭಿಪ್ರಾಯವನ್ನು ಪರಿಗಣಿಸದೆ ಇರುವ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಕೈಗೊಂಡಿದ್ದಲ್ಲಿ ವಿವರಗಳನ್ನು ಒದಗಿಸುವುದು)

## ವಿವಿಧ ನಗರಗಳ ಸ್ವಚ್ಛತೆಗೆ ಅನುಸರಿಸಬೇಕಾದ ಮಾನದಂಡಗಳ ಬಗ್ಗೆ

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) –**

೨೦೨ (೧೯೯೧) ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ವಿವಿಧ ನಗರಗಳ ಸ್ವಚ್ಛತೆಗೆ ಅನುಸರಿಸಬೇಕಾಗಿರುವ ಮಾನದಂಡಗಳೇನು ;

(ಆ) ಸದರಿ ಮಾನದಂಡಗಳಿಗೆ ನಗರವಾರು ಯಾವ ರೀತಿಯಲ್ಲಿ ಕಾರ್ಯೋನ್ಮುಖವಾಗಿದೆ ಎಂಬ ಮಾಹಿತಿಗಳನ್ನು ಸರ್ಕಾರ ಯಾವ ರೀತಿಯಲ್ಲಿ ಪಡೆದುಕೊಳ್ಳುತ್ತಿದೆ ; (ವಿವರ ನೀಡುವುದು)

(ಇ) ಸ್ವಚ್ಛತೆಯಲ್ಲಿ ಅತಿ ಕನಿಷ್ಟವಾಗಿ ಕಾರ್ಯನಿರ್ವಹಿಸುತ್ತಿರುವ ಎಷ್ಟು ನಗರಗಳನ್ನು ಸರ್ಕಾರ ಬಡಾವಣೆವಾರು ಗುರುತಿಸಿದೆಯೇ ; (ಹಾಗಿದ್ದಲ್ಲಿ ವಿವರ ಒದಗಿಸುವುದು)

(ಈ) ನೀರಿನ ಕೊರತೆಯಿಂದ ಸ್ವಚ್ಛತೆಗೆ ಸಮಸ್ಯೆಯಾಗಿರುವ ಬಡಾವಣೆಯ ನಗರಗಳನ್ನು ಸರ್ಕಾರ ವರ್ಗೀಕರಿಸಿದೆಯೇ ? (ಹಾಗಿದ್ದಲ್ಲಿ, ವಿವರವಾದ ಮಾಹಿತಿಯನ್ನು ಒದಗಿಸುವುದು)

## ಹಜ್‌ ಯಾತ್ರಿಗಳಿಗೆ ತರಬೇತಿ ಮತ್ತು ವಕ್ಫ್ ಆಸ್ತಿಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೨೦೩ (೧೯೬೧) ಪೌರಾಡಳಿತ ಮತ್ತು ಹಜ್‌ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ವರ್ಷ ಹಜ್ ಯಾತ್ರಾರ್ಥಿಗಳಿಗೆ ಜಿಲ್ಲಾವಾರು ಎಷ್ಟು ತರಬೇತಿ ಶಿಬಿರಗಳನ್ನು ನಡೆಸಲಾಗುತ್ತಿದೆ ; ವಿಮಾನ ನಿಲ್ದಾಣಗಳಲ್ಲಿ (ಬೆಂಗಳೂರು ಮತ್ತು ಮಂಗಳೂರು) ಹಜ್‌ ಯಾತ್ರಾರ್ಥಿಗಳಿಗೆ ನೀಡುವ ವಿಶೇಷ ವ್ಯವಸ್ಥೆಗಳು ಯಾವುವು ;

(ಆ) ಕಳೆದ ಮೂರು ವರ್ಷಗಳಲ್ಲಿ ಹಜ್‌ ಯಾತ್ರೆಗೆ ಸಂಬಂಧಿಸಿದಂತೆ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಹಜ್‌ ಸಮಿತಿಯ ಹಣಕಾಸು ಲೆಕ್ಕ ಪರಿಶೋಧನೆ (Audit) ವರದಿ ಸದನದ ಮುಂದೆ ಮಂಡಿಸಲಾಗಿದೆಯೇ ;

(ಇ) ರಾಜ್ಯ ವಕ್ಫ್ ಮಂಡಳಿ ಅಧೀನದಲ್ಲಿರುವ ಆಸ್ತಿಗಳ ಸಂಖ್ಯೆ ಎಷ್ಟು ; ವಕ್ಫ್ ಆಸ್ತಿಗಳ ಅಕ್ರಮ ಅತಿಕ್ರಮಣ ಕುರಿತು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ?

## ತೋಟಗಾರಿಕಾ ಇಲಾಖೆಯ ಅನುದಾನ ಬಿಡುಗಡೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) –**

೨೦೪ (೧೯೬೨) ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯಲ್ಲಿ ಎಷ್ಟು ಹೆಕ್ಟೇರ್‌ನಲ್ಲಿ ತೋಟಗಾರಿಕಾ ಬೆಳೆಗಳನ್ನು ಬೆಳೆಯಲಾಗುತ್ತಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ತುಮಕೂರು ಜಿಲ್ಲೆಯ ತೋಟಗಾರಿಕಾ ಇಲಾಖೆಗೆ ರೈತರಿಗೆ ಸಂಬಂಧಿಸಿದಂತೆ ವಿವಿಧ ಯೋಜನೆಯಡಿಯಲ್ಲಿ ರಾಷ್ಟ್ರೀಯ ತೋಟಗಾರಿಕಾ ಮಿಷನ್ (ಎನ್.ಎಚ್.ಎಂ.), ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ

(ಆರ್.ಕೆ.ವಿ.ವೈ) ಸಮಗ್ರ ತೋಟಗಾರಿಕಾ ಅಭಿವೃದ್ಧಿ (ಸಿಎಚ್‌ಡಿ) ಯೋಜನೆಯಡಿಯಲ್ಲಿ ಹಾಗೂ ಮುಂತಾದ ಯೋಜನೆಗಳಡಿಯಲ್ಲಿ ಕಳೆದ ಐದು ವರ್ಷಗಳಲ್ಲಿ ಇದ್ದ ಗುರಿಯೆಷ್ಟು ; ಬಿಡುಗಡೆಯಾದ ಅನುದಾನ ಹಾಗೂ ವೆಚ್ಚವಾದ ಅನುದಾನವೆಷ್ಟು ; (ತಾಲ್ಲೂಕುವಾರು, ಯೋಜನೆವಾರು ಮತ್ತು ವರ್ಷವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆಯಲ್ಲಿ ತೋಟಗಾರಿಕೆಯ ಯಾಂತ್ರೀಕರಣಕ್ಕೆ ರೈತರು ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು ; ಎಷ್ಟು ಜನ ರೈತರಿಗೆ ಯಾಂತ್ರೀಕರಣಕ್ಕಾಗಿ ಹಣ/ಯಂತ್ರ ನೀಡಲಾಗಿದೆ ; ಸದರಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಅನುಸರಿಸಿದ ಮಾನದಂಡಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಹನಿ ನೀರಾವರಿಗೆ ಸ್ಪ್ರಿಂಕ್ಲರ್ ಅಳವಡಿಸಿಕೊಂಡ ನಂತರ ಸಬ್ಸಿಡಿಗಾಗಿ ಎಷ್ಟು ರೈತರು ಅರ್ಜಿ ಸಲ್ಲಿಸಿದ್ದಾರೆ ; ಎಷ್ಟು ಜನರಿಗೆ ಹಣ ಬಿಡುಗಡೆ ಮಾಡಲಾಗಿದೆ ; ಬಾಕಿಯಿರುವ ರೈತರಿಗೆ ಯಾವ ಕಾಲಮಿತಿಯಲ್ಲಿ ಅನುದಾನ ಬಿಡುಗಡೆ ಮಾಡಲಾಗುವುದು ? (ತಾಲ್ಲೂಕುವಾರು ವರ್ಷವಾರು ಮಾಹಿತಿ ನೀಡುವುದು)

## ಕಲಬುರಗಿ ಜಿಲ್ಲೆಯ ಕೈಗಾರಿಕಾ ವಲಯಗಳ ಅಭಿವೃದ್ಧಿ, ಪ್ಲಾಟ್‌ಗಳ ಹಂಚಿಕೆ ಮತ್ತು ಸ್ಥಳೀಯರಿಗೆ ಉದ್ಯೋಗಾವಕಾಶ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) –**

೨೦೫ (೧೯೦೦) ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯ ಪ್ರಮುಖ ಕೈಗಾರಿಕಾ ಪ್ರದೇಶಗಳಾದ ನಂದೂರ–ಕೇಸರಟಗಿ, ಕಾಪನೂರ ಮತ್ತು ಮದೂಲ ಕೈಗಾರಿಕಾ ವಲಯಗಳಲ್ಲಿ ಪ್ರಸ್ತುತ ಕೆ.ಐ.ಎ.ಡಿ.ಬಿ. (KIADB) ವತಿಯಿಂದ ಅಭಿವೃದ್ಧಿಪಡಿಸಲಾದ ಎಷ್ಟು ಪ್ಲಾಟ್‌ಗಳು ಹಂಚಿಕೆಯಾಗದೆ ಬಾಕಿ ಇವೆ ; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಕಲಬುರಗಿಯಲ್ಲಿ ಎಷ್ಟು ಹೊಸ ಉದ್ದಿಮೆಗಳಿಗೆ ಜಾಗ ಹಂಚಿಕೆ ಮಾಡಲಾಗಿದೆ ; ಇದರಲ್ಲಿ ಸಿಮೆಂಟ್ ಮತ್ತು ಬೇಳೆಕಾಳು ಸಂಸ್ಕರಣಾ (Pulse Processing) ಘಟಕಗಳ ಪಾಲು ಎಷ್ಟಿದೆ ;

(ಇ) ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗಾಗಿ ಮೀಸಲಿಟ್ಟ ಕೈಗಾರಿಕಾ ಪ್ರದೇಶಗಳಲ್ಲಿ ಜಾಗ ಪಡೆದೂ ಸಹ ಉತ್ಪಾದನೆ ಆರಂಭಿಸದ ಉದ್ದಿಮೆದಾರರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇಂತಹ ಎಷ್ಟು ಪ್ಲಾಟ್‌ಗಳನ್ನು ಮರು–ಸ್ವಾಧೀನಪಡಿಸಿಕೊಳ್ಳಲಾಗಿದೆ ;

(ಈ) ಕಲಬುರಗಿ ಜಿಲ್ಲೆಯನ್ನು 'ಬೇಳೆಕಾಳುಗಳ ಕಣಜ' ಎನ್ನಲಾಗುತ್ತಿದ್ದು, ಇಲ್ಲಿನ ಖಾಲಿ ಪ್ಲಾಟ್‌ಗಳಲ್ಲಿ ಮೌಲ್ಯವರ್ಧಿತ ಕೃಷಿ–ಆಧಾರಿತ (Agro-based) ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರ ಯಾವುದಾದರೂ ವಿಶೇಷ ಸಬ್ಸಿಡಿ ಅಥವಾ 'ಸ್ಪೆಷಲ್ ಇನ್ವೆಸ್ಟ್‌ಮೆಂಟ್ ರೀಜನ್' (SIR) ಯೋಜನೆ ರೂಪಿಸಿದೆಯೇ ;

(ಉ) ಕಲಬುರಗಿ ಜಿಲ್ಲೆಯ ಸ್ಥಳೀಯ ಯುವಕರಿಗೆ ಮತ್ತು ತಾಂತ್ರಿಕ ಪದವೀಧರರಿಗೆ ಜಿಲ್ಲೆಯ ಬೃಹತ್ ಕೈಗಾರಿಕೆಗಳಲ್ಲಿ (ವಿಶೇಷವಾಗಿ ಸಿಮೆಂಟ್ ಕಾರ್ಖಾನೆಗಳಲ್ಲಿ) ಕಡ್ಡಾಯವಾಗಿ ಉದ್ಯೋಗ ನೀಡುವ ನಿಯಮ ಜಾರಿಯಲ್ಲಿದೆಯೇ ; ಇಲ್ಲದಿದ್ದಲ್ಲಿ, ಸ್ಥಳೀಯರಿಗೆ ಉದ್ಯೋಗ ಖಾತರಿಪಡಿಸಲು ಸರ್ಕಾರ ಯಾವ ಹೊಸ ಕ್ರಮ ಕೈಗೊಳ್ಳಲಿದೆ ?

## ಪೌರ ಕಾರ್ಮಿಕರಿಗೆ ವೇತನ ಪಾವತಿ ಮಾಡದಿರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೬ (೧೯೫೫) ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೆಂಗಳೂರು ದಕ್ಷಿಣ ಜಿಲ್ಲೆಯ ಹಾರೋಹಳ್ಳಿ ಪುರಸಭೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಕಳೆದ ೫ ತಿಂಗಳುಗಳಿಂದ

ವೇತನ ಪಾವತಿ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವೇತನ ಪಾವತಿ ಮಾಡದೇ ಇರಲು ಕಾರಣಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಸಣ್ಣ ಕೈಗಾರಿಕೆಗಳ ಸ್ಥಿತಿಗತಿ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೭ (೧೯೭೦) ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಬೆಂಗಳೂರು ನಗರ ಜಿಲ್ಲೆಗಳಲ್ಲಿ ಹೊಸದಾಗಿ ಎಷ್ಟು ಸಣ್ಣ ಕೈಗಾರಿಕೆಗಳು ಕಾರ್ಯಾರಂಭ ಮಾಡಿವೆ ; ಈ ಸಣ್ಣ ಕೈಗಾರಿಕೆಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಎಷ್ಟು ಸರ್ಕಾರಿ ಮತ್ತು ಖಾಸಗಿ ಸಣ್ಣ ಕೈಗಾರಿಕೆಗಳು ಮುಚ್ಚಲ್ಪಟ್ಟಿವೆ ; ಮುಚ್ಚಲು ಕಾರಣಗಳೇನು ; (ವಿವರ ನೀಡುವುದು)

(ಇ) ಪ್ರಸ್ತುತ ಹಣಕಾಸಿನ ವರ್ಷದಲ್ಲಿ ಸಣ್ಣ ಕೈಗಾರಿಕೆಗಳಿಗೆ ನೀಡಿರುವ ಸಾಲದ ಮತ್ತು ಸಬ್ಸಿಡಿ ಪ್ರಮಾಣ ಎಷ್ಟು ; ಸಾಲ ಮತ್ತು ಸಬ್ಸಿಡಿ ಪಡೆದ ಕಂಪನಿಗಳ ವಿವರ ನೀಡುವುದು ?

## ರಾಜ್ಯದಲ್ಲಿರುವ ಇಂದಿರಾ ಕ್ಯಾಂಟೀನ್‌ಗಳ ಮಾಹಿತಿ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೮ (೧೯೯೩) ಪೌರಾಡಳಿತ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಇಂದಿರಾ ಕ್ಯಾಂಟೀನ್‌ಗಳಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಇದರಲ್ಲಿ ಎಷ್ಟು ಕ್ಯಾಂಟೀನ್‌ಗಳು ಕಾರ್ಯನಿರ್ವಹಿಸುತ್ತಿವೆ ; ಕಾರ್ಯನಿರ್ವಹಿಸದೆ ಇರುವ ಕ್ಯಾಂಟೀನ್‌ಗಳು ಎಷ್ಟು ; ಯಾವ ಕಾರಣಕ್ಕಾಗಿ ಅವುಗಳ ಕಾರ್ಯವನ್ನು ನಿಲ್ಲಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಇಂದಿರಾ ಕ್ಯಾಂಟೀನ್‌ಗಳಿಗೆ ಒಂದು ತಿಂಗಳಿಗೆ ಎಷ್ಟು ಹಣ ಖರ್ಚು ಮಾಡಲಾಗುತ್ತದೆ ;

(ಈ) ಸದರಿ ಇಂದಿರಾ ಕ್ಯಾಂಟೀನ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಹಾಗೂ ಸದರಿ ಸಿಬ್ಬಂದಿಗಳಿಗೆ ವೇತನ ಸರಿಯಾದ ಸಮಯದಲ್ಲಿ ನೀಡಲಾಗುತ್ತಿದೆಯೇ ; ಹಾಗೂ ಎಷ್ಟು ವೇತನ ಬಾಕಿ ಇರುತ್ತದೆ ? (ತಿಂಗಳುವಾರು ವಿವರ ನೀಡುವುದು)

## ಮಂಗಳೂರು ಮಹಾನಗರ ಪಾಲಿಕೆಯಡಿ ಕುದ್ಮುಲ್ ರಂಗರಾವ್ ಸ್ಮಾರಕ ಅಭಿವೃದ್ಧಿಗೆ ಮೀಸಲಿಟ್ಟ ಅನುದಾನ ಬಳಕೆಯಲ್ಲಿನ ವಿಳಂಬ ಕುರಿತು

**ಶ್ರೀ ಎಫ್.ಹೆಚ್. ಜಕ್ಕಪ್ಪನವರ್ (ನಾಮನಿರ್ದೇಶನ ಹೊಂದಿದವರು) –**

೨೦೯ (೧೯೮೬) ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆಯು ೨೦೧೯–೨೦ನೇ ಸಾಲಿನಲ್ಲಿ 'ಮಹಾತ್ಮಗಾಂಧಿ ನಗರ ವಿಕಾಸ ಯೋಜನೆ'ಯಡಿಯಲ್ಲಿ ಸಮಾಜ ಸುಧಾರಕ ಕುದ್ಮುಲ್ ರಂಗರಾವ್ ಅವರ ಪುಣ್ಯಭೂಮಿ ಸ್ಮಾರಕ ಅಭಿವೃದ್ಧಿಪಡಿಸಲು ರೂ. ೩.೦೦ ಕೋಟಿ (ಮೂರು ಕೋಟಿ ರೂಪಾಯಿ) ಅನುದಾನವನ್ನು ಮೀಸಲಿಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಯೋಜನೆಯು ಅನುಮೋದನೆಗೊಂಡು ಸುಮಾರು ೪–೫ ವರ್ಷಗಳೇ ಕಳೆದಿದ್ದರೂ, ಮೀಸಲಿಟ್ಟ ಹಣವನ್ನು ಇಲ್ಲಿಯವರೆಗೆ ಸ್ಮಾರಕದ ಅಭಿವೃದ್ಧಿ

ಕಾರ್ಯಕ್ಕೆ ಬಳಸದೆ ಇರಲು ಕಾರಣಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯ ವಿಳಂಬಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಈ ಅನುದಾನವು ಬೇರೆ ಯಾವುದಾದರೂ ಉದ್ದೇಶಕ್ಕೆ ಬಳಕೆಯಾಗಿದೆಯೇ ಅಥವಾ ಸರ್ಕಾರದ ಖಜಾನೆಯಲ್ಲಿ ಬಾಕಿ ಇದೆಯೇ ;

(ಈ) ಮಹಾನ್ ಚೇತನ ಕುದ್ಮುಲ್ ರಂಗರಾವ್ ಅವರ ಸ್ಮಾರಕವನ್ನು ಗೌರವಯುತವಾಗಿ ಅಭಿವೃದ್ಧಿಪಡಿಸಲು ಸರ್ಕಾರವು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಿದೆ ?

## ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಸಿಬ್ಬಂದಿಗಳ ವೇತನ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೨೧೦ (೧೯೮೨) ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಗೆ ಮಂಜೂರಾದ ಹುದ್ದೆಗಳೆಷ್ಟು ; ಅದರಲ್ಲಿ ಎಷ್ಟು ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಆ) ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸಿಬ್ಬಂದಿಗಳಿಗೆ ವೇತನ ಮತ್ತು ಪಿಂಚಣಿ ನೀಡುವ ಜವಾಬ್ದಾರಿ ಯಾರಿಗೆ ಇರುವುದು ; (ವಿವರವಾದ ಮಾಹಿತಿ ನೀಡುವುದು)

(ಇ) ಮಹಾನಗರ ಪಾಲಿಕೆ ಸಿಬ್ಬಂದಿಗೆ ಪ್ರತಿ ತಿಂಗಳು ವೇತನ ಹಾಗೂ ನಿವೃತ್ತ ಸಿಬ್ಬಂದಿಗೆ ಪಿಂಚಣಿ ಸರಿಯಾಗಿ ಪಾವತಿಸಲಾಗುತ್ತಿದೆಯೇ ;

(ಈ) ಕಳೆದ ವರ್ಷ ಮಹಾನಗರ ಪಾಲಿಕೆಯು ಸಿಬ್ಬಂದಿಯ ವೇತನಕ್ಕಾಗಿ ಸುಮಾರು ೨೧ ಕೋಟಿ ಹಣ ಖರ್ಚು ಮಾಡಿದೆ ಎಂದು ಹೇಳುತ್ತಿರುವುದು ನಿಜವೇ ? (ಮಾಹಿತಿ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು ಕಾ.ಸೂ. – ಪ್ರತಿಗಳು